**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 1332/2024**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 9

ಸಾಕ್ಷಿದಾರರ ಹೆಸರು : ಸುನೀಲ್ ಕುಮಾರ್
ತಂದೆಯ ಹೆಸರು: : ಆನಂದ್
ವಯಸ್ಸು : **28 ವರ್ಷ**
ಉದ್ಯೋಗ : ವ್ಯಾಪಾರ
ವಾಸಸ್ಥಳ : ಬಾವಿಕೆರೆ

**ದಿನಾಂಕ: 09-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಒಂದು ವರ್ಷದ ಹಿಂದೆ ಬಾವಿಕೆರೆಯ ಪೆಟ್ರೋಲ್ ಬಂಕ್ ಹತ್ತಿರ ಅಪಘಾತದ ವಿಚಾರವಾಗಿ ಪೊಲೀಸರು ಮಹಜರ್ ಕ್ರಮವನ್ನು ಜರುಗಿಸಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ನಂತರ ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಮತ್ತೊಂದು ಮಹಜರ್ ಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಒಂದು ಕ್ರೇನ್ ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-9 ಮತ್ತು 10 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ಪೊಲೀಸರು ಮಹಜರ್ ಗೆ ಸಹಿ ಮಾಡಲು ಯಾವುದೇ ನೋಟೀಸ್ ನೀಡಿರುವುದಿಲ್ಲ. ನನ್ನ ಜೊತೆ ಮಹಜರ್ ಗೆ ದಯಾನಂದ್ ರವರು ಸಹಿ ಮಾಡಿರುತ್ತಾರೆ. ನಾನು ಹಾಗೂ ದಯಾನಂದ್ ರವರು ಜೊತೆಗೆ ಹೋಗಿ ಸಹಿ ಮಾಡಿರುತ್ತೇವೆ. ದಯಾನಂದ್ ರವರನ್ನು ಯಾರು ಕರೆದುಕೊಂಡು ಬಂದರು ಎಂದು ನನಗೆ ಗೊತ್ತಿಲ್ಲ. ಮಹಜರನ್ನು ಪೊಲೀಸರು ನನ್ನ ಸಮಕ್ಷಮದಲ್ಲಿ ಬರೆದಿರುತ್ತಾರೆ. ಮಹಜರ್ ನಲ್ಲಿ ಬರೆದಿರುವ ವಿಚಾರಗಳು ನನಗೆ ನೆನಪಿಲ್ಲ. ಪೊಲೀಸರು ಎರಡೂ ಮಹಜರ್ ನ್ನು ಠಾಣೆಯಲ್ಲೇ ಕುಳಿತು ತಯಾರಿಸಿದ್ದು, ನೀವು ಠಾಣೆಯಲ್ಲೇ ಸಹಿ ಮಾಡಿರುತ್ತೀರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**